ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-560001.

ಸಂಖ್ಯೆ:ಕಾಶಿಇ:ಶೈವಿ/151/ಮಳೆ ಹಾನಿ/2019-20

ದಿನಾಂಕ: 16.08.2019

# ಸುತ್ತೋಲೆ

ವಿಷಯ: ಭಾರಿ ಮಳೆಯಿಂದಾಗಿ ಉಂಟಾದ ಪ್ರವಾಹದಿಂದ ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 146 ಯುಎನ್ಇ 2019 ದಿನಾಂಕ:14.08.2019.

* * * * * *

2019 ನೇ ಸಾಲಿನ ಆಗಸ್ಟ್ ತಿಂಗಳಿನಲ್ಲಿ ಸುರಿದ ಭಾರಿ ಮಳೆಯಿಂದಾಗಿ ಉಂಟಾದ ಪ್ರವಾಹ ಮತ್ತು ಭೂಕುಸಿತದಿಂದಾಗಿ ಕರ್ನಾಟಕದ ವಿವಿಧ ಪ್ರದೇಶಗಳಲ್ಲಿ ಅಪಾರ ಪ್ರಮಾಣದ ಹಾನಿ ಸಂಭವಿಸುತ್ತಿರುವುದರಿಂದ ಈ ಪ್ರದೇಶಗಳ ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ಈ ಕೆಳಕಂಡ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಗಿದೆ.

1. ಪ್ರವಾಹ ಪೀಡಿತ ಪ್ರದೇಶಗಳಲ್ಲಿನ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣಕ್ಕಾಗಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಗೊಳ್ಳಲು ಬಯಸಿದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಿ ಹಾಜರಾತಿ, ಹಾಸ್ಟೆಲ್ ಸೌಲಭ್ಯ ಒದಗಿಸುವಂತೆ ಹಾಗೂ ವಿಶೇಷ ತರಗತಿಗಳನ್ನು ನಡೆಸುವ ಮೂಲಕ ಪಠ್ಯಕ್ರಮಗಳನ್ನು ಪೂರ್ಣಗೊಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

2. ವಿದ್ಯಾರ್ಥಿಗಳ ನೀರುಪಾಲಾಗಿರಬಹುದಾದ ಶೈಕ್ಷಣಿಕ ಪ್ರಮಾಣ ಪತ್ರಗಳು, ಪುಸ್ತಕಗಳು, ಬ್ಯಾಗ್ ಇತ್ಯಾಧಿ ಅಗತ್ಯ ವಸ್ತುಗಳನ್ನು ಅವರಿಗೆ ಉಚಿತವಾಗಿ ಒದಗಿಸಲು ಕ್ರಮಕೈಗೊಳ್ಳುವುದು.

3. ಪ್ರವಾಹ ಪೀಡಿತ ಭಾಗಗಳಲ್ಲಿರುವ ವಿದ್ಯಾರ್ಥಿಗಳ ಯೋಗಕ್ಷೇಮವನ್ನು ನೋಡಿಕೊಂಡು ಸಂತ್ರಸ್ತರಿಗೆ ಹೆಚ್ಚಿನ ಆತ್ಮಸ್ಥೈರ್ಯ ತುಂಬಲು ಸಹಕಾರ ನೀಡುವುದು.

4. ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳಲ್ಲಿನ ಎನ್.ಎಸ್.ಎಸ್. ಮತ್ತು ಎನ್.ಸಿ.ಸಿ.ಘಟಕಗಳ ಕ್ಯಾಂಪುಗಳನ್ನು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಆಯೋಜಿಸಿ, ಪ್ರವಾಹ ಪೀಡಿತ ಮತ್ತು ಹಾನಿಯಾಗಿರುವ ಪ್ರದೇಶಗಳಲ್ಲಿ ಸ್ವಚ್ಚತೆಯನ್ನು ಕೈಗೊಳ್ಳಲು ಹಾಗೂ ಸಂತ್ರಸ್ತರಲ್ಲಿ ಆತ್ಮಸ್ಥೈರ್ಯ ತುಂಬಲು ಹಾಗೂ ಜಿಲ್ಲಾಡಳಿತಗಳು ಕೈಗೊಳ್ಳುವ ಪುರ್ನವಸತಿ ಕಾರ್ಯಕ್ರಮಗಳಲ್ಲಿ ಜಿಲ್ಲಾಡಳಿತಕ್ಕೆ ಅಗತ್ಯ ಸಹಕಾರ ನೀಡುವುದು.

5. ಪ್ರವಾಹ ಪೀಡಿತ ಪ್ರದೇಶಗಳ ವಿದ್ಯಾರ್ಥಿಗಳಿಗೆ ಅಗತ್ಯ ಸಾರಿಗೆ ವ್ಯವಸ್ಥೆ ಮತ್ತು ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲು ಕ್ರಮಕೈಗೊಳ್ಳುವುದು.

6. ವಿದ್ಯಾರ್ಥಿಗಳಿಗೆ ಉಂಟಾಗಿರಬಹುದಾದ ಆಘಾತದಿಂದ ಹೊರಬರುವಂತಾಗಲು ನಿಮ್ಹಾನ್ಸ್ ವತಿಯಿಂದ ನಡೆಸುತ್ತಿರುವ ಯುವ ಸ್ಪಂದನದ ಮೂಲಕ ವಿದ್ಯಾರ್ಥಿಗಳಿಗೆ ಕೌನ್ಸಿಲಿಂಗ್ ನೀಡುವ ವ್ಯವಸ್ಥೆಗಳನ್ನು ಕಲ್ಪಿಸಿ, ಅಲ್ಲಿನ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಹರಿಸಲು ಕ್ರಮಕೈಗೊಳ್ಳುವುದು.

7. ವಿದ್ಯಾರ್ಥಿಗಳಿಗೆ ಅಗತ್ಯ ಸಹಕಾರ ನೀಡುವಲ್ಲಿ ಹಾಗೂ ಮನೋಸ್ಥೈರ್ಯವನ್ನು ತುಂಬುವಲ್ಲಿ ಸ್ಥಳೀಯವಾಗಿ ಅಗತ್ಯವೆನಿಸಿದ ಕ್ರಮಗಳನ್ನು ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳು ಹಾಗೂ ಕಾಲೇಜು ಶಿಕ್ಷಣ ಇಲಾಖೆ ಹಾಗೂ ಎನ್.ಸಿ.ಸಿ. ನಿರ್ದೇಶನಾಲಯದಿಂದ ಕೈಗೊಳ್ಳುವುದು.

8. ಈ ಎಲ್ಲಾ ಮಾಹಿತಿಗಳು ವಿದ್ಯಾರ್ಥಿಗಳಿಗೆ ಹಾಗೂ ಪೋಷಕರುಗಳ ಗಮನಕ್ಕೆ ತರಲು ಅನುಕೂಲವಾಗುವಂತೆ ಜಿಲ್ಲಾಧಿಕಾರಿಗಳ ಕಛೇರಿ / ವಿಶ್ವವಿದ್ಯಾಲಯಗಳ ಮತ್ತು ಸಂಯೋಜಿತ ಕಾಲೇಜುಗಳ ಸೂಚನಾ ಫಲಕಗಳಲ್ಲಿ ಪೋಸ್ಟರ್‌ಗಳನ್ನು ಅಳವಡಿಸಲು ಕ್ರಮವಹಿಸುವಂತೆ ಹಾಗೂ ಇಲಾಖೆಯ ವತಿಯಿಂದ ಕೈಗೊಳ್ಳಲಾಗುತ್ತಿರುವ ಸಹಾಯಕ ಕ್ರಮಗಳ ಬಗ್ಗೆ ಪತ್ರಿಕಾ ಪ್ರಕಟಣೆ / ದೃಶ್ಯ ಮಾಧ್ಯಮ / ಸಾಮಾಜಿಕ ಜಾಲತಾಣಗಳ ಮೂಲಕ ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಕ್ರಮವಹಿಸುವುದು.

ಮೇಲಿನ ಎಲ್ಲಾ ಅಂಶಗಳಂತೆ ಸಮರೋಪಾದಿಯಲ್ಲಿ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ಕ್ರಮಕೈಗೊಂಡು ಕೈಗೊಂಡ ಕ್ರಮದ ಬಗ್ಗೆ ಕ್ರೋಢೀಕೃತ ವರದಿಯನ್ನು ತಮ್ಮ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳ ಕುಲಸಚಿವರು(ಮೌಲ್ಯಮಾಪನ) ರವರಿಗೆ ಒಂದು ಪ್ರತಿಯನ್ನು ಹಾಗೂ ಈ ಕಛೇರಿಗೆ ದ್ವಿಪ್ರತಿಯಲ್ಲಿ ಸಲ್ಲಿಸಲು ಸೂಚಿಸಲಾಗಿದೆ.

16/8/19

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ: ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ರಾಜ್ಯದ ಎಲ್ಲಾ ಪ್ರವಾಹ ಪೀಡಿತ ಜಿಲ್ಲೆಗಳಲ್ಲಿನ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. **ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.**
4. ಕಛೇರಿ ಪ್ರತಿ.